14

ಬೆಂಗಳೂರು ನಗರ ವಿಶ್ವವಿದ್ಯಾನಿಲಯ BENGALURU CITY UNIVERSITY
ಸೆಂಟ್ರಲ್ ಕಾಲೇಜು ಆವರಣ, ಡಾ॥ ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು– 560 001.
Ph.No.080-22961016 / 22131385 E-Mail ID: registrarbcu@gmail.com

ಸಂಖ್ಯೆ:ಬೆನವಿ/01/ಶೈಕ್ಷಣಿಕ/ NBC-ಮಾರ್ಗಸೂಚಿ/293/2020–21 ದಿನಾಂಕ: 05-09-2020

ಗೆ,
ಪ್ರಾಂಶುಪಾಲರು,
ಬೆಂಗಳೂರು ನಗರ ವಿಶ್ವವಿದ್ಯಾಲನಿಯದ
ಎಲ್ಲಾ ಸಂಯೋಜಿತ ಕಾಲೇಜುಗಳು,
ಬೆಂಗಳೂರು.

ಮಾನ್ಯರೆ,

ವಿಷಯ: ಕಾಲೇಜುಗಳ ಕಟ್ಟಡ ನಿರ್ಮಾಣ ಮಾಡುವಾಗ National Building Code (NBC) ಮಾರ್ಗಸೂಚಿಗಳನ್ನು ಪಾಲಿಸುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಪತ್ರ ಸಂಖ್ಯೆ: ಇಡಿ 93 ಯುಎನ್ಇ 2019 ದಿನಾಂಕ: 30–12–2019.
2. ದಿನಾಂಕ: 27–02–2020 ರಂದು ಸಿಂಡಿಕೇಟ್ ಸಭೆಯ ನಿರ್ಣಯ.
3. ವಿಶ್ವವಿದ್ಯಾಲಯದ ಪತ್ರದ ಸಂಖ್ಯೆ BCU/01/ACA/NBC/2019-20/251 ದಿನಾಂಕ: 18–03–2020
4. ಸರ್ಕಾರದ ಪತ್ರ ಸಂಖ್ಯೆ: ಇಡಿ 218 ಯುಎನ್ಇ 2020 ದಿನಾಂಕ 24–08–2020.
5. ಕುಲಪತಿಗಳ ಆದೇಶದ ದಿನಾಂಕ: 1/8/3/2020......

*****

ಶೈಕ್ಷಣಿಕ ಸಂಸ್ಥೆಗಳು ಕಟ್ಟಡ ಕಾಮಗಾರಿ ನಿರ್ಮಾಣದಲ್ಲಿ National Building Code (NBC) ಮಾರ್ಗಸೂಚಿಗಳನ್ನು ಪಾಲಿಸುವುದು ಕಡ್ಡಾಯವಾಗಿ ಪಾಲಿಸುವಂತೆ ಮತ್ತು ನಿರ್ಮಾಣಗೊಂಡಿರುವ ಕಟ್ಟಡಗಳಲ್ಲಿ ವಿದ್ಯಾರ್ಥಿಗಳ ಸುರಕ್ಷತೆ ಮತ್ತು ಅಗ್ನಿಶಾಮಕ (Student safety and fire safety norms) ಅಳವಡಿಕೊಳ್ಳುವ ನಿಟ್ಟಿನಲ್ಲಿ ಕಾಲೇಜುಗಳು ಅಗತ್ಯ ಮೂಲಭೂತ ಸೌಲಭ್ಯಗಳನ್ನು ಹೊಂದಿರಬೇಕು, ತಪ್ಪಿದಲ್ಲಿ ಸಂಸ್ಥೆಯ ಮಾನ್ಯತೆ ರದ್ದುಗೊಳಿಸುವಂತೆ ಮತ್ತು ಕಾನೂನು ಕ್ರಮ ಜರುಗಿಸಬೇಕೆಂದು ಉಲ್ಲೇಖಿತ (4) ರ ಪತ್ರಗಳಲ್ಲಿ ಸೂಚಿಸಲಾಗಿದೆ. ಅದರ ಪ್ರತಿಯನ್ನು ಇದರೊಂದಿಗೆ ಲಗತ್ತಿಸಲಾಗಿದೆ.

ಈ ನಿಟ್ಟಿನಲ್ಲಿ ಅಗತ್ಯ ಕ್ರಮಗಳನ್ನು ತೆಗೆದುಕೊಂಡು ಅನುಸರಣ ವರದಿಯನ್ನು ಸಲ್ಲಿಸಬೇಕೆಂದು ಸೂಚಿಸಲಾಗಿದೆ.

ತಮ್ಮ ವಿಶ್ವಾಸಿ,

05/09/2020
ಕುಲಸಚಿವರು

ಪ್ರತಿ:
1. ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ. ಬೆಂ.ನ.ವಿ. ಬೆಂಗಳೂರು–01.
2. ಅಧೀನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ. ಬೆಂ.ನ.ವಿ. ಬೆಂಗಳೂರು–01.
3. ಕುಲಪತಿ, ಕುಲಸಚಿವರು, ಸಲಸಚಿವರು (ಮೌ), ಆಪ್ತ ಕಾರ್ಯದರ್ಶಿಗಳಿಗೆ, ಬೆಂ.ನ.ವಿ. ಬೆಂಗಳೂರು.
4. ವೆಬ್‌ಸೈಟ್ / ಕಛೇರಿ ಪ್ರತಿ.

13



ಸಂಖ್ಯೆ: ಇಡಿ 218 ಯುಎನ್ಇ 2020

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 24.08.2020.

## ಸುತ್ತೋಲೆ

ಖಾಸಗಿ ಪ್ರಾಥಮಿಕ ಶಾಲಾ ಶಿಕ್ಷಣ ಸಂಸ್ಥೆಗಳಲ್ಲಿ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವ ಸಂಬಂಧ ಮಾನ್ಯ ಸರ್ವೋಚ್ಚ ನ್ಯಾಯಾಲಯದ ರಿಟ್ ಪಿಟಿಶನ್ ಸಂಖ್ಯೆ: 483/2004, ದಿನಾಂಕ:13.04.2009ರ ತೀರ್ಪಿನನ್ವಯ ಹೊಸ ಖಾಸಗಿ ಶಾಲೆಗಳಿಗೆ ನೋಂದಣಿ, ಮಾನ್ಯತೆ, ಮಾನ್ಯತೆ ನವೀಕರಣ ಮತ್ತು ಸಂಯೋಜನೆ ನೀಡುವ ಪೂರ್ವದಲ್ಲಿ ಶಾಲಾ ಆಡಳಿತ ಮಂಡಳಿಗಳಿಂದ ಶಾಲಾ ಕಟ್ಟಡವನ್ನು ಭಾರತದ ರಾಷ್ಟ್ರೀಯ ಕಟ್ಟಡ ಸಂಹಿತೆಯಲ್ಲಿನ NBC (National Building Code) ನಿಯಮಾವಳಿಯನ್ವಯ ಕಟ್ಟಡದ ಸುರಕ್ಷತೆ ಕುರಿತು ಸಕ್ಷಮ ಪ್ರಾಧಿಕಾರದಿಂದ ಪಡೆದ ಧೃಡೀಕರಣ ಹಾಗೂ ಅಗ್ನಿನಂದಕ ಉಪಕರಣಗಳನ್ನು ಅಳವಡಿಸಿ, ತುರ್ತು ಪರಿಸ್ಥಿತಿಯಲ್ಲಿ ಸದರಿ ಉಪಕರಣದ ಬಳಕೆ ಕುರಿತು ತರಬೇತಿ ಪಡೆದಿರುವ ಬಗ್ಗೆ ಧೃಢೀಕರಣ ಮತ್ತು ಶಾಲೆಯ ಆವರಣವು ಎಲ್ಲಾ ರೀತಿಯ ಅಗ್ನಿ ದುರಂತಗಳಿಂದ ಹಾಗೂ ವಿಷಯುಕ್ತ ಪದಾರ್ಥಗಳಿಂದ ಮುಕ್ತಿ ಹೊಂದಿರುವ ಬಗ್ಗೆ ಧೃಢೀಕರಿಸುವುದು ಎಂದು ನಿರ್ದೇಶನವನ್ನು ನೀಡಿರುತ್ತದೆ.

ಮಾನ್ಯ ಸರ್ವೋಚ್ಚ ನ್ಯಾಯಾಲಯದ ನಿರ್ದೇಶನದಂತೆ ಹಾಗೂ ಸರ್ಕಾರದ ಮಾರ್ಗಸೂಚಿಯಂತೆ, ಇನ್ನು ಮುಂದೆ ಖಾಸಗಿ/ಸರ್ಕಾರಿ ಕಾಲೇಜು ಕಟ್ಟಡಗಳು ಸಧೃಡತೆ/ಸುರಕ್ಷತೆ ಕುರಿತು National Building Code-2016 ರ ನಿಯಮಾನುಸಾರ ಹಾಗೂ Fire Services Department ನಿಂದ (Compliance certificate) ಧೃಢೀಕರಣ ಪತ್ರಗಳನ್ನು ಪಡೆಯುವುದು ಕಡ್ಡಾಯವಾಗಿರುವುದರಿಂದ, ಈ ಬಗ್ಗೆ ಜಿಲ್ಲಾ ಮಟ್ಟದಲ್ಲಿ ಲೋಕೋಪಯೋಗಿ ಇಲಾಖೆ ಪರಿವೀಕ್ಷಣೆ ನಡೆಸಿ ಖಚಿತಪಡಿಸಿಕೊಳ್ಳತಕ್ಕದ್ದು.

ಹೊಸ ಕಾಲೇಜು ಸ್ಥಾಪಿಸಲು ಉದ್ದೇಶಿಸಿ, ಸಂಯೋಜನೆ ಕೋರಿ ಸಲ್ಲಿಸಲಾಗುವ ಅರ್ಜಿಗಳನ್ನು ವಿಶ್ವವಿದ್ಯಾಲಯಗಳು ಸ್ವೀಕರಿಸಿದ ನಂತರ, NBC (National Building Code) ನಿಯಮಾವಳಿಯನ್ವಯ ಕಟ್ಟಡದ ಸುರಕ್ಷತೆಯ ಕುರಿತು ಲೋಕೋಪಯೋಗಿ ಇಲಾಖೆ ಮತ್ತು Fire Services Department ನಿಂದ Compliance Certificates ಗಳನ್ನು ಪಡೆದಿರುವುದನ್ನು ಧೃಢಪಡಿಸಿಕೊಂಡು ಸೂಕ್ತ ಶಿಫಾರಸ್ಸಿನೊಂದಿಗೆ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸುವುದು. ಸಂಯೋಜನಾ

ಅರ್ಜಿಯೊಂದಿಗೆ ಮೇಲ್ಕಂಡ ಸುರಕ್ಷತಾ ಪ್ರಮಾಣ ಪತ್ರಗಳ ಸಲ್ಲಿಕೆಯನ್ನು ವಿಶ್ವವಿದ್ಯಾಲಯಗಳು ಅಗತ್ಯಪಡಿಸತಕ್ಕದ್ದು. ಕಟ್ಟಡ ಸುರಕ್ಷತಾ ಪ್ರಮಾಣ ಪತ್ರಗಳ ರಹಿತವಾಗಿ ಸಲ್ಲಿಸಲಾಗುವ ಹೊಸ ಸಂಯೋಜನಾ ಅರ್ಜಿಗಳನ್ನು ವಿಶ್ವವಿದ್ಯಾಲಯಗಳು ಪರಿಗಣಿಸತಕ್ಕದ್ದಲ್ಲ. ಲೀಸ್ ಮೇಲೆ ಪಡೆದ ಕಟ್ಟಡಗಳಿಗೂ ಹಾಗೂ ಈಗಾಗಲೇ ಅಸ್ತಿತ್ವದಲ್ಲಿರುವ ಕಾಲೇಜುಗಳು ಸ್ಥಳಾಂತರಗೊಳ್ಳಲು ಉದ್ದೇಶಿಸಿರುವ ಕಟ್ಟಡಗಳಿಗೂ ಈ ನಿಬಂಧನೆಯು ಅನ್ವಯಿಸುತ್ತದೆ.

National Building Code of India ದ ಸುರಕ್ಷಾ ಹಾಗೂ Fire safety ಮಾನದಂಡಗಳನ್ನು ಪಾಲಿಸದಿರುವುದು ಕಂಡುಬಂದಲ್ಲಿ, ಸಂಬಂಧಿಸಿದವರ ವಿರುದ್ಧ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುವುದು.

(ಶೀತಲ್ ಎಂ. ಹಿರೇಮಠ)
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ (ವಿಶ್ವವಿದ್ಯಾನಿಲಯ-1)

ಗೆ:

1. ಸರ್ಕಾರದ ಕಾರ್ಯದರ್ಶಿಗಳು, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, 3ನೇ ಮಹಡಿ, ವಿಕಾಸ ಸೌಧ, ಬೆಂಗಳೂರು.
2. ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
3. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಬೆಂಗಳೂರು.
4. ಮುಖ್ಯ ಇಂಜಿನಿಯರ್, (ಸಂಪರ್ಕ ಮತ್ತು ಕಟ್ಟಡಗಳು) ದಕ್ಷಿಣ, ಬೆಂಗಳೂರು.
5. ಮುಖ್ಯ ಇಂಜಿನಿಯರ್, (ಸಂಪರ್ಕ ಮತ್ತು ಕಟ್ಟಡಗಳು) ಉತ್ತರ, ಧಾರವಾಡ
6. ಮುಖ್ಯ ಇಂಜಿನಿಯರ್, (ಸಂಪರ್ಕ ಮತ್ತು ಕಟ್ಟಡಗಳು) ಈಶಾನ್ಯ, ಕಲ್ಬುರ್ಗಿ.
7. ಗೌರವಾನ್ವಿತ ರಾಜ್ಯಪಾಲರ ಆಪ್ತ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ.
8. ವಿಶೇಷಾಧಿಕಾರಿಗಳು, ಇ-ಆಡಳಿತ ಘಟಕ, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು
9. ಕುಲಸಚಿವರು, ಬೆಂಗಳೂರು ವಿಶ್ವವಿದ್ಯಾನಿಲಯ, ಬೆಂಗಳೂರು-560056.
10. ಕುಲಸಚಿವರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು-570005.

..3

12



11. ಕುಲಸಚಿವರು, ಕರ್ನಾಟಕ ವಿಶ್ವವಿದ್ಯಾನಿಲಯ, ಧಾರವಾಡ-580033.
12. ಕುಲಸಚಿವರು, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ, ಶಿವಮೊಗ್ಗ ಜಿಲ್ಲೆ-577451.
13. ಕುಲಸಚಿವರು, ಗುಲ್ಬರ್ಗಾ ವಿಶ್ವವಿದ್ಯಾನಿಲಯ, ಕಲಬುರಗಿ-585106.
14. ಕುಲಸಚಿವರು, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳೂರು-574199.
15. ಕುಲಸಚಿವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು-572101.
16. ಕುಲಸಚಿವರು, ಕನ್ನಡ ವಿಶ್ವವಿದ್ಯಾನಿಲಯ, ಹಂಪಿ - 583276.
17. ಕುಲಸಚಿವರು, ದಾವಣಗೆರೆ ವಿಶ್ವವಿದ್ಯಾನಿಲಯ, ದಾವಣಗೆರೆ.
18. ಕುಲಸಚಿವರು, ರಾಣಿ ಚೆನ್ನಮ್ಮ ವಿಶ್ವವಿದ್ಯಾನಿಲಯ, ಬೆಳಗಾವಿ.
19. ಕುಲಸಚಿವರು, ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾನಿಲಯ, ಬಳ್ಳಾರಿ.
20. ಕುಲಸಚಿವರು, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾನಿಲಯ, ಬೆಳಗಾವಿ.
21. ಕುಲಸಚಿವರು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಮೈಸೂರು-570006.
22. ಕುಲಸಚಿವರು, ಕರ್ನಾಟಕ ಮಹಿಳಾ ವಿಶ್ವವಿದ್ಯಾನಿಲಯ, ವಿಜಯಪುರ-586101.
23. ಕುಲಸಚಿವರು, ಕರ್ನಾಟಕ ರಾಜ್ಯ ಸಂಸ್ಕೃತ ವಿಶ್ವವಿದ್ಯಾನಿಲಯ, ಚಾಮರಾಜಪೇಟೆ, ಬೆಂಗಳೂರು.
24. ಕುಲಸಚಿವರು, ಕರ್ನಾಟಕ ಜಾನಪದ ವಿಶ್ವವಿದ್ಯಾನಿಲಯ, ಗೊಟಗೋಡಿ, ಶಿಗ್ಗಾವಿ ತಾಲ್ಲೂಕು, ಹಾವೇರಿ ಜಿಲ್ಲೆ.
25. ಕುಲಸಚಿವರು, ಡಾ.ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾನಿಲಯ, ಮೈಸೂರು.
26. ಕುಲಸಚಿವರು ಬೆಂಗಳೂರು ಉತ್ತರ ವಿಶ್ವವಿದ್ಯಾಲಯ ಶ್ರೀ ದೇವರಾಜ ಅರಸು ಬಡಾವಣೆ ಕೋಲಾರ.
27. ಕುಲಸಚಿವರು ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ ಸೆಂಟ್ರಲ್ ಕಾಲೇಜು ಆವರಣ ಬೆಂಗಳೂರು.
28. ಎಲ್ಲಾ ಖಾಸಗಿ ವಿಶ್ವವಿದ್ಯಾನಿಲಯಗಳ ಕುಲಪತಿಗಳು- ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಬೆಂಗಳೂರು, ಇವರ ಮೂಲಕ.